# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

ಸಿ.ಸಿ. ನಂಃ 615/2015 ಸಿಡಬ್ಲೂ : 10 ಪಿಡಬ್ಲೂಃ 2

ಪ್ರಮಾಣವಚನ ಬೋಧಿಸಲಾಯಿತು ದಿಃ 08-01-2025

ಹೆಸರು : ಪರಸಪ್ಪ

ತಂದೆ ಹೆಸರು : ಶಿವಪ್ಪ ವನಂಜಕರ್

ವಯಸ್ಸು : 42 ವರ್ಷ

ಉದ್ಯೋಗ : ಪಿ.ಐ, ಸಿ ಇ ಎನ್ ಪೊಲೀಸ್ ಠಾಣೆ ಕಲಬುರಗಿ

ವಾಸಸ್ಥಳ : ಕಲಬುರಗಿ

**: ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :**

ನಾನು ದಿಃ 10-12-2012 ರಿಂದ ದಿಃ 25-09-2014 ವರೆಗೆ ಸೇಡಂ ಪೋಲೀಸ್ ಠಾಣೆಯಲ್ಲಿ ಆರಕ್ಷಕ ಉಪ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ನಾನು ದಿಃ 24-12-2013 ರಂದು ಮಧ್ಯಾಹ್ನ 03-00 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾಃ 1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ಸಲ್ಲಿಸಿದರು. ಸದರಿ ದೂರಿನ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ 260/2013 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು. ಸದರಿ ದೂರನ್ನು ಈಗ ನೋಡುತ್ತಿದ್ದು ಅದನ್ನು ನಿಪಿ- 1 ಎಂದು ಗುರುತಿಸಲಾಯಿತು. ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ- 1(ಎ) ಎಂದು ಗುರುತಿಸಲಾಯಿತು. ಅದೇ ರೀತಿ ಪ್ರ.ವ. ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ- 2(ಎ) ಎಂದು ಗುರುತಿಲಾಯಿತು.

ನಂತರ ಘಟನಾ ಸ್ದಳಕ್ಕೆ ಭೇಟಿ ನೀಡಿ ಚಾ ಸಾ 2 ಮತ್ತು 3 ರವರನ್ನು ಬರ ಮಾಡಿಕೊಂಡು ಅವರ ಸಮಕ್ಷಮ ಆರೋಪಿತರ ಕಿರಾಣಿ ಅಂಗಡಿಯಲ್ಲಿರುವ 390 ಜಂಡೂ ಬಾಂಬ್ ಡಬ್ಬಿಗಳ ಪಂಚನಾಮೆಯನ್ನು ಸಂಜೆ 04-15 ರಿಂದ 04-45 ರವರೆಗೆ ಜರುಗಿಸಿರುತ್ತೇನೆ. ಸಾಕ್ಷಿಯು ಸದರಿ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿ ಪಿ 3 ಎಂದು ಗುರುತಿಸಲಾಯಿತು. ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ ಪಿ 3 (ಎ) ಎಂದು ಗುರುತಿಸಲಾಯಿತು.

ನಂತರ ಘಟನಾ ಸ್ಥಳದ ಪಂಚನಾಮೆಯನ್ನು ಚಾ ಸಾ 2 ಮತ್ತು 3 ರವರ ಸಮಕ್ಷಮ ಸಾಯಂಕಾಲ 05-30 ರಿಂದ 06-00 ರ ವರೆಗೆ ಜರುಗಿಸಿರುತ್ತೇನೆ. ಸಾಕ್ಷಿಯು ಸದರಿ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿ ಪಿ 4 ಎಂದು ಗುರುತಿಸಲಾಯಿತು. ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ ಪಿ 4 (ಎ) ಎಂದು ಗುರುತಿಸಲಾಯಿತು. ಅದೇ ದಿನ ಚಾ ಸಾ 4 ರಿಂದ 7 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿ. 18-02-2014 ರಂದು emami ಕಂಪನಿದವರು ಒಂದು ವರದಿಯನ್ನು ಸಲ್ಲಿಸಿರುತ್ತಾರೆ ಅದನ್ನು ಸ್ವೀಕರಿಸಿಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಸದರಿ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನುನ ನಿ ಪಿ 5 ಎಂದು ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ 5(ಎ) ಎಂದು ಗುರುತಿಸಲಾಯಿತು.

ದಿ. 25-12-2013 ರಂದು ಸದರಿ ಪ್ರಕರಣದ ಆರೋಪಿತನಿಗೆ ದಸ್ತಗಿರಿ ಮಾಡಿ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ನಂತರ ವರ್ಗಾವಣೆ ಗೊಂಡಿರುವುದರಿಂದ ಸದರಿ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾ ಸಾ 11 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದ ಃ

ಚಾ ಸಾ 1 ರವರು ದೂರು ಸಲ್ಲಿಸುವ ಸಮಯದಲ್ಲಿ ಆರೋಪಿತನು ಆತನ ಅಂಗಡಿಯಲ್ಲಿ ನಕಲಿ ಜಂಡೂಬಾಂಬ್ ಮಾರಾಟ ಮಾಡುತ್ತಿದ್ದಾನೆ ಅಂತಾ ತಿಳಿಸಿರುತ್ತಾನೆ. ನಿ ಪಿ 1 ದೂರಿನಲ್ಲಿ ನಾನು ದಾಳಿ ಮಾಡಿರುತ್ತೇನೆ ಎಂದು ಬರೆಯಿಸಿರುತ್ತಾರೆ ಎಂದರೆ ಸರಿಯಿಲ್ಲ. ನಾನು ಆರೋಪಿತರ ಅಂಗಡಿಯಲ್ಲಿರುವ ಜಂಡೂಬಾಂಬ್ ಡಬ್ಬಿಗಳ ಮೇಲೆ ನೊಂದಾಯಿತ ಕಂಪನಿಯ ಟ್ರೇಡ್ ಮಾರ್ಕ ಇದೆಯಾ ಅಥವಾ ಇಲ್ಲ ಎಂಬುದರ ಬಗ್ಗೆ ವಿಚಾರಣೆ ಮಾಡಿಲ್ಲ ಎಂದರೆ ಸರಿಯಿಲ್ಲ. ಅದೇ ರೀತಿ ಕಂಪನಿಕಡೆಯಿಂದ ಟ್ರೇಡ್ ಮಾರ್ಕ ಪ್ರಮಾಣ ಪತ್ರವನ್ನು ಪಡೆದುಕೊಂಡಿಲ್ಲ ಎಂದರೆ ಸರಿ. ನಾನು ಆರೋಪಿತರ ಅಂಗಡಿಗೆಹೋಗಿ ಯಾವುದೇ ರೀತಿಯ ದಾಳಿ ಮಾಡಿಲ್ಲ ಹಾಗೂ ಸುಳ್ಳು ಪ್ರಕರಣವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಿಲ್ಲ. ಅದೇ ರೀತಿ ಚಾ ಸಾ 4 ರಿಂದ 7 ರವರ ಹೇಳಿಕೆಯನ್ನು ಪಡೆದುಕೊಂಡಿದ್ದೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಿಲ್ಲ. Emami ಕಂಪನಿಯ ವರದಿಯನ್ನು ಹೊರತು ಪಡಿಸಿ ಬೇರೆ ಸಕ್ಷಮ ಪ್ರಾದಿಕಾರದಿಂದ ವರದಿಯನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ಎಫ್ ಎಸ್ ಎಲ್ ಮಡಿವಾಳದಿಂದ ಪಡೆದುಕೊಂಡಿರುತ್ತೇವೆ ಎಂದು ನುಡಿಯುತ್ತೇವೆ.

ಆರೋಪಿಗೆ ದಸ್ತಗಿರಿ ಮಾಡಿ ಠಾಣಾ ಜಾಮಿನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ ಎಂದರೆ ಸರಿಯಿಲ್ಲ. ಆರೋಪಿತನು ಯಾವುದೇ ರೀತಿಯ ನಕಲಿ ಜಂಡೂಬಾಂಬ್ಗಳನ್ನು ಮಾರಾಟ ಮಾರುತ್ತಿರಲ್ಲಿಲ್ಲ ಹಾಗೂ ಆತನ ಬಳಿ ಯಾವುದೇ ರೀತಿಯ ಜಂಡೂಬಾಂಬ್ ಸಿಕ್ಕಿಲ್ಲ ಎಂದರೆ ಸರಿಯಿಲ್ಲ. ಜಂಡೂಬಾಂಬ್ ಕಂಪನಿಯವರು ಮೊದಲು ಘಟನಾ ಸ್ದಳಕ್ಕೆ ಹೋಗಿ ಪರಿಶೀಲನೆ ಮಾಡಿ ನಂತರ ಬಂದು ನನಗೆ ಮಾಹಿತಿ ನೀಡಿರುತ್ತಾರೆ ಎಂದರೆ ಸಾಕ್ಷಿಯು ಚಾ ಸಾ 1 ರವರ ಮೊದಲು ಘಟನಾ ಸ್ದಳಕ್ಕೆ ಹೋಗಿ ಪರಿಶೀಲನೆ ಮಾಡಿದಾಗ ನಕಲಿ ಜಂಡೂಬಾಂಬ್ ಕಂಡು ಬಂದಾಗ ನಮಗೆ ಒಂದು ಲಿಖಿತ ದೂರನ್ನು ಸಲ್ಲಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**